# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಕೃಷಿ ಬೆಲೆ ಆಯೋಗದ ಕರ್ತವ್ಯ, ಷರತ್ತು ಮತ್ತು ನಿಬಂಧನೆಗಳ ಬಗ್ಗೆ.

ಓದಲಾಗಿದೆ:- 1. ಸರ್ಕಾರದ ಆದೇಶ ಸಂಖ್ಯೆ: ಕೃಇ 61 ಕೃಉಇ 2013 ದಿ: 31-01-2014.

2. ಸರ್ಕಾರದ ಆದೇಶ ಸಂಖ್ಯೆ: ಕೃಇ 12 ಕೃಉಇ 2014 ದಿ: 25-06-2014.

3. ಸರ್ಕಾರದ ಆದೇಶ ಸಂಖ್ಯೆ: ಕೃಇ 57 ಕೃಇಕ 2017 ದಿ: 14-07-2017.

4. ಸರ್ಕಾರದ ಅಧಿಸೂಚನೆ ಸಂಖ್ಯೆ: AGRI.-ACT/86/2019 ದಿ: 04.09.2019.

5. ಕೃಷಿ ನಿರ್ದೇಶಕರವರ ಪ್ರಸ್ತಾವನೆ ಸಂಖ್ಯೆ: ಕ.ಕೃ.ಬೆ.ಆ/2019-20 ದಿನಾಂಕ: 09-09-2019.

**ಪ್ರಸ್ತಾವನೆ:**

ಮೇಲೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ, ಕೃಷಿ ಬೆಲೆ ಆಯೋಗವನ್ನು ಅಧ್ಯಕ್ಷರು ಹಾಗೂ 5 ಸದಸ್ಯರನ್ನೊಳಗೊಂಡಂತೆ ಷರತ್ತು ಮತ್ತು ನಿಬಂಧನೆಗಳು, ಕರ್ತವ್ಯಗಳು, ರಚನೆ ಮಾಡಿ ಆಯೋಗವನ್ನು ರಚಿಸಲಾಗಿದೆ.

ಮೇಲೆ (2)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ, ಡಾ: ಟಿ.ಎನ್. ಪ್ರಕಾಶ್ ಕಮ್ಮರಡಿ ರವರನ್ನು ಕೃಷಿ ಬೆಲೆ ಆಯೋಗದ ಅಧ್ಯಕ್ಷರನ್ನಾಗಿ ಮತ್ತು 5 ಸದಸ್ಯರುಗಳನ್ನು ನೇಮಕ ಮಾಡಿ ಆದೇಶ ಹೊರಡಿಸಲಾಗಿದೆ.

ಮೇಲೆ (3)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ, ಕರ್ನಾಟಕ ಕೃಷಿ ಬೆಲೆ ಆಯೋಗವನ್ನು ಮತ್ತೊಂದು ಅವಧಿಗೆ (2017-2020) ರ ವರೆಗೆ ಮುಂದುರೆಸಿ ಆದೇಶಿಸಿದೆ.

ಮೇಲೆ (4)ರಲ್ಲಿ ಓದಲಾದ ಸರ್ಕಾರದ ಅಧಿಸೂಚನೆಯಲ್ಲಿ, ಕೃಷಿ ಬೆಲೆ ಆಯೋಗದ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿದ್ದ ಡಾ: ಟಿ.ಎನ್. ಪ್ರಕಾಶ್ ಕಮ್ಮರಡಿ ರವರ ನೇಮಕಾತಿಯನ್ನು ರದ್ದುಪಡಿಸಿ, ಶ್ರೀ ಹನುಮನಗೌಡ ಬೆಳಗುರ್ಕಿ ರವರನ್ನು ಕೃಷಿ ಬೆಲೆ ಆಯೋಗದ ಅಧ್ಯಕ್ಷರನ್ನಾಗಿ ನೇಮಕ ಮಾಡಿ ಆದೇಶಿಸಿದೆ ಮತ್ತು ಇವರ ನೇಮಕಾತಿಗೆ ಸಂಬಂಧಿಸಿದ ಷರತ್ತು ಮತ್ತು ನಿಬಂಧನೆಗಳನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದೆಂದು ತಿಳಿಸಲಾಗಿದೆ.

..2)

ಮೇಲೆ (5)ರಲ್ಲಿ ಓದಲಾದ ಕೃಷಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿ, ಕೃಷಿ ಬೆಲೆ ಆಯೋಗ ರವರ ಪ್ರಸ್ತಾವನೆಯಲ್ಲಿ, ಶ್ರೀ ಹನುಮನಗೌಡ ಬೆಳಗುರ್ಕಿ ರವರು ದಿನಾಂಕ 05.09.2019ರ ಪೂರ್ವಾಹ್ನ ಕೃಷಿ ಬೆಲೆ ಆಯೋಗದ ಅಧ್ಯಕ್ಷರ ಕಾರ್ಯಭಾರವನ್ನು ವಹಿಸಿಕೊಂಡಿರುತ್ತಾರೆ. ಸರ್ಕಾರದ ಅಧಿಸೂಚನೆ ದಿನಾಂಕ 04.09.2019ರಲ್ಲಿ ತಿಳಿಸಿರುವಂತೆ ಅಧ್ಯಕ್ಷರ ನೇಮಕಾತಿಗೆ ಸಂಬಂಧಿಸಿದ ಷರತ್ತು ಮತ್ತು ನಿಬಂಧನೆಗಳ ಬಗ್ಗೆ ಆದೇಶ ಹೊರಡಿಸುವಂತೆ ಮತ್ತು ಸದರಿಯವರಿಗೆ ರಾಜ್ಯ ಸಚಿವರ ಸ್ಥಾನಮಾನವನ್ನು ನೀಡುವಂತೆ ಹಾಗೂ ಕೃಷಿ ಬೆಲೆ ಆಯೋಗಕ್ಕೆ ಇಬ್ಬರು ಅಧಿಕಾರೇತರ ರೈತ ಪ್ರತಿನಿಧಿ ಸದಸ್ಯರನ್ನು ನಾಮನಿರ್ದೇಶನ ಮಾಡಿ ಆದೇಶಿಸಲು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಉಲ್ಲೇಖ (4)ರ ಅಧಿಸೂಚನೆಯಲ್ಲಿ ತಿಳಿಸಿರುವಂತೆ ಮೊದಲಿಗೆ ಕೃಷಿ ಬೆಲೆ ಆಯೋಗಕ್ಕೆ ಸಂಬಂಧಿಸಿದ ಷರತ್ತು ಮತ್ತು ನಿಬಂಧನೆಗಳನ್ನು ಹೊರಡಿಸಿ, ತದನಂತರ ಸಚಿವ ಸ್ಥಾನಮಾನವನ್ನು ಮತ್ತು ಇಬ್ಬರು ಅಧಿಕಾರೇತರ ಸದಸ್ಯರ ನಾಮನಿರ್ದೇಶನ ಸಂಬಂಧ ಪ್ರತ್ಯೇಕವಾಗಿ ಆದೇಶ ಹೊರಡಿಸಲಾಗುವುದೆಂದು ನಿರ್ಧರಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: AGRI-ACT/86/2019, ಬೆಂಗಳೂರು, ದಿನಾಂಕ: 24.10.2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರದ ಅಧಿಸೂಚನೆ ಸಂಖ್ಯೆ: AGRI.-ACT/86/2019 ದಿನಾಂಕ: 04.09.2019 ರಲ್ಲಿ ಶ್ರೀ ಹನುಮನಗೌಡ ಬೆಳಗುರ್ಕಿ ರವರನ್ನು ಕೃಷಿ ಬೆಲೆ ಆಯೋಗದ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ. ಈ ಅಧ್ಯಕ್ಷರಿಗೆ ಸಂಬಂಧಿಸಿದಂತೆ ಷರತ್ತು ಮತ್ತು ನಿಬಂಧನೆಗಳು ಹಾಗೂ ಕರ್ತವ್ಯಗಳನ್ನು (ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧ-1, 2, ಮತ್ತು 3 ರಂತೆ) ನಿಗದಿಪಡಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

B S Nagaratnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01

..3)

2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01
3. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
6. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
7. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.(ಅಗತ್ಯ ಕ್ರಮಕ್ಕಾಗಿ)
8. ಶ್ರೀ ಹನುಮನಗೌಡ ಬೆಳಗುರ್ಕಿ S/o ಅಮರೇಶಪ್ಪ ಗೌಡ, ಈಶ್ವರ ದೇವಸ್ಥಾನದ ಹತ್ತಿರ, ಬೆಳಗುರ್ಕಿ, ರಾಯಚೂರು-584128.
9. ಡಾ: ಟಿ.ಎನ್. ಪ್ರಕಾಶ್ ಕಮ್ಮರಡಿ, 'ಪೃಥ್ವಿ' ಸಂ. 175, ಎ ಸೆಕ್ಟರ್, 5ನೇ ಮುಖ್ಯ ರಸ್ತೆ, ನ್ಯೂ ಯಲಹಂಕ ಟೌನ್, ಬೆಂಗಳೂರು-560106 – ಆಯೋಗದಿಂದ ಒದಗಿಸಲಾಗಿರುವ ಸವಲತ್ತು / ಸೌಲಭ್ಯಗಳನ್ನು ಹಿಂದಿರುಗಿಸುವಂತೆ ಕೋರಿದೆ.
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಹಕಾರ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಎಲ್ಲಾ ಜಿಲ್ಲಾಧಿಕಾರಿಗಳು / ವಿಭಾಗಾಧಿಕಾರಿಗಳು / ಇಲಾಖಾ ಮುಖ್ಯಸ್ಥರು
12. ಎಲ್ಲಾ ಜಿಲ್ಲಾ ಪಂಚಾಯತ್ ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
13. ಎಲ್ಲಾ ಸಚಿವರುಗಳ ಆಪ್ತ ಕಾರ್ಯದರ್ಶಿಗಳು
14. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು.
15. ನಿರ್ದೇಶಕರು, ತೋಟಗಾರಿಕೆ ಇಲಾಖೆ, ಲಾಲ್ ಬಾಗ್, ಬೆಂಗಳೂರು
16. ನಿರ್ದೇಶಕರು, ಕೃಷಿ ಮಾರುಕಟ್ಟೆ ನಿರ್ದೇಶನಾಲಯ, ಬೆಂಗಳೂರು
17. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು/ಧಾರವಾಡ/ರಾಯಚೂರು
18. ಕುಲಪತಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ
19. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿಗಳು
20. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಇಲಾಖೆ, ಕೃಷಿ ಇಲಾಖೆ.
21. ಸರ್ಕಾರದ ಉಪ ಕಾರ್ಯದರ್ಶಿ ರವರ ಆಪ್ತ ಸಹಾಯಕರು, ಕೃಷಿ ಇಲಾಖೆ.
22. ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.